ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ

ಸಿ.ಸಿ. ಸಂಖ್ಯೆ **1501/2024**

ಪಿರ್ಯಾದಿ : ಚನ್ನಾಂಬಿಕ ಹೋಂ ಅಪ್ಲೈಯನ್ಸಸ್,
ಇದರ ಪರವಾಗಿ ಪ್ರೊಪ್ರೈಟರ್
ಗಗನ್, ವಯಸ್ಸು ಸುಮಾರು 23 ವರ್ಷ,
ಬಿನ್ ಭಾನುಪ್ರಕಾಶ್,
ವಾಸಃ ಕೆ.ಎಂ ರಸ್ತೆ,
ಮೂಡಿಗೆರೆ ಪಟ್ಟಣ ಮತ್ತು ಅಂಚೆ,
ಮೂಡಿಗೆರೆ ತಾಲ್ಲೂಕು,
ಚಿಕ್ಕಮಗಳೂರು ಜಿಲ್ಲೆ.

ವಿರುದ್ಧ

ಆರೋಪಿ : ವಾಸಿಮ್, ವಯಸ್ಸು ಸುಮಾರು 38 ವರ್ಷ,
ಬಿನ್ ಮೊಹಮ್ಮದ್ ಖಲಂದರ್,
ವಾಸಃ ಛತ್ರಮೈದಾನ,
ಮೂಡಿಗೆರೆ ಪಟ್ಟಣ ಮತ್ತು ಅಂಚೆ,
ಮೂಡಿಗೆರೆ ತಾಲ್ಲೂಕು.

ಆಪಾದನೆಯ ಸಾರಾಂಶ

ಶ್ರೀ ವಿಶ್ವನಾಥ್ ಎ., ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ, ಆದ ನಾನು, ಆರೋಪಿಯಾದ ನಿಮ್ಮ ಮೇಲೆ ಮಾಡುವ ಆಪಾದನೆ ಏನೆಂದರೆಃ-

ಆರೋಪಿಯಾದ ನೀವು ಪಿರ್ಯಾದುದಾರ ಶಾಪ್ ನಿಂದ ದಿನಾಂಕ 28.12.2023 ರಂದು 40,000/- ರೂಪಾಯಿ ಬೆಲೆಯ ವಾಷಿಂಗ್ ಮೆಷಿನ್ ಅನ್ನು ತೆಗೆದುಕೊಂಡಿದ್ದು, ಸದರಿ ಹಣದ ಮರುಪಾವತಿಗಾಗಿ ನಿಮ್ಮ ಖಾತೆ ಹೊಂದಿರುವ ಕೆನರಾ ಬ್ಯಾಂಕ್, ಮೂಡಿಗೆರೆ ಶಾಖೆಯ ಚೆಕ್ ಸಂಖ್ಯೆ 664558, ದಿನಾಂಕ 30.03.2024, ರೂ.40,000/- ಎಂದು ನಮೂದಿಸಿ ನೀಡಿದ್ದು, ಸದರಿ ಚೆಕ್ ಅನ್ನು ಫಿರ್ಯಾದಿಯು ಬ್ಯಾಂಕ್ ಆಫ್ ಬರೋಡಾ, ಮೂಡಿಗೆರೆ ಶಾಖೆಗೆ ಜಮೆಗಾಗಿ ಸಲ್ಲಿಸಿದಾಗ, ನಿಮ್ಮ ಖಾತೆಯಲ್ಲಿ ಸಾಕಷ್ಟು ಹಣವಿಲ್ಲ (Funds Insufficient) ಎಂದು ಹಿಂಬರಹ ನೀಡಿರುತ್ತಾರೆ. ಕಾರಣ, ಫಿರ್ಯಾದಿಯು ದಿನಾಂಕ 29.04.2024 ರಂದು ನೋಟೀಸ್ ಮೂಲಕ ಆರೋಪಿಯಾದ ನಿಮಗೆ ಸದರಿ ವಿಚಾರವನ್ನು ತಿಳಿಸಿದರೂ ಸಹ ನೀವು ಹಣವನ್ನು ವಾಪಸ್ ಮಾಡಿರುವುದಿಲ್ಲ. ಈ ರೀತ್ಯಾ ನೀವು ನೆಗೋಷಿಬಲ್ ಇನ್ಸ್ಟ್ರುಮೆಂಟ್ ಆಕ್ಟ್ ಕಲಂ 138 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಮಾಡಿರುವಿರಿ ಎಂದು ಆಪಾದಿಸಲಾಗಿದೆ?

ಪ್ರಃ 1. ಈಗ ಮೇಲೆ ಓದಿ ಹೇಳಿದ ಆಪಾದನೆಯನ್ನು ಕೇಳಿದ್ದೀರಾ? ಅದು ನಿಮಗೆ ಅರ್ಥವಾಯಿತೇ?

ಆರೋಪಿಯ ಉತ್ತರಃ

ಪ್ರಃ 2. ನೀವು ಆಪಾದನೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ?

ಆರೋಪಿಯ ಉತ್ತರಃ

*(*ದಿನಾಂಕ 23.11.2024 ರಂದು ಆಪಾದನೆಯ ಸಾರಾಂಶವನ್ನು ಆರೋಪಿಗೆ ತಿಳಿಯುವ ಭಾಷೆಯಲ್ಲಿ ಓದಿ, ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು. ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣೀಕರಿಸುತ್ತೇನೆ*)*

**Sd/-**

ಮೂಡಿಗೆರೆ
ದಿನಾಂಕಃ 23.11.2024

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
**ಜೆ.ಎಂ.ಎಫ್.ಸಿ, ಮೂಡಿಗೆರೆ.**